# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 327 |
| ಸದಸ್ಯರ ಹೆಸರು | ಶ್ರೀ ಆರ್.ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | 12.07.2018 |
| ಉತ್ತರಿಸುವ ಸಚಿವರು | ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಕನ್ನಡ ಅಭಿವೃದ್ಧಿ ದೃಷ್ಟಿಯಿಂದ ಇಲಾಖೆ ಹಾಕಿಕೊಂಡಿರುವ ಕಾರ್ಯಕ್ರಮಗಳು ಯಾವುವು; (ವಿವರಗಳನ್ನು ನೀಡುವುದು) | ಆಡಳಿತದಲ್ಲಿ ಕನ್ನಡ ಭಾಷೆಯ ಪರಿಣಾಮಕಾರಿ ಅನುಷ್ಠಾನದ ಕುರಿತಂತೆ ಪರಿಶೀಲಿಸುವ ಪ್ರಾಥಮಿಕ ಜವಾಬ್ದಾರಿಯನ್ನು ಕನ್ನಡ ಅಭಿವೃದ್ಧಿ ಪ್ರಾಧಿಕಾರ ಹೊಂದಿದೆ. ತನ್ನ ಕ್ರಿಯಾ ಯೋಜನೆಯ ಭಾಗವಾಗಿ ಸಾಮಾಜಿಕವಾಗಿ ಕನ್ನಡವನ್ನು ಉಳಿಸುವ ನಿಟ್ಟಿನಲ್ಲಿ ಕನ್ನಡ ಮಾಧ್ಯಮದಲ್ಲಿ ಎಸ್.ಎಸ್.ಎಲ್.ಸಿ ಹಾಗೂ ಪಿ.ಯು.ಸಿ ಯಲ್ಲಿ ಅತ್ಯುನ್ನತ ಅಂಕ ಗಳಿಸಿದ ವಿದ್ಯಾರ್ಥಿಗಳಿಗೆ ನಗದು ಪುರಸ್ಕಾರ, ಕನ್ನಡದಲ್ಲಿ ತೀರ್ಪು ನೀಡಿದ ಅಧೀನ ನ್ಯಾಯಾಲಯದ ನ್ಯಾಯಾಧೀಶರುಗಳಿಗೆ ಹಾಗೂ ಕನ್ನಡದಲ್ಲಿ ವಾದ ಮಂಡಿಸಿದ ಸರ್ಕಾರಿ ಅಭಿಯೋಜಕರುಗಳಿಗೆ ಸನ್ಮಾನ, ಕೇಂದ್ರ ನಾಗರಿಕ ಸೇವಾ ಪರೀಕ್ಷೆಗಳಲ್ಲಿ ಅತ್ಯುನ್ನತ ಸಾಧನೆ ಮಾಡಿದ ಅಭ್ಯರ್ಥಿಗಳಿಗೆ ಸನ್ಮಾನದಂತಹ ಕಾರ್ಯಕ್ರಮಗಳನ್ನು ಆಯೋಜಿಸಿ ಕನ್ನಡ ಅಭಿವೃದ್ಧಿಗೆ ಪರೋಕ್ಷ ಪ್ರೇರಣೆಯನ್ನು ನೀಡಲಾಗುತ್ತಿದೆ. |
| ಆ) | ಕನ್ನಡದಲ್ಲಿ ತೀರ್ಪು ನೀಡುವ ನ್ಯಾಯಾಧೀಶರುಗಳಿಗೆ ಪುರಸ್ಕಾರ ನೀಡುವಂತೆ ಕನ್ನಡದಲ್ಲಿ ವಕೀಲಿ ವೃತ್ತಿ ಮಾಡುವವರಿಗೂ ಪ್ರೋತ್ಸಾಹ – ಪುರಸ್ಕಾರ ನೀಡಲು ಸರ್ಕಾರ ಕ್ರಮ ಕೈಗೊಳ್ಳುತ್ತಿದೆಯೇ; | ಇಂತಹ ಯಾವುದೇ ಪ್ರಸ್ತಾವನೆ ಸರ್ಕಾರದ ಮುಂದೆ ಇರುವುದಿಲ್ಲ. |
| ಇ) | ಸಾಂಸ್ಕೃತಿಕ ಚಟುವಟಿಕೆಗಳನ್ನು ನಡೆಸುವ ಕನ್ನಡಪರ ಸಂಸ್ಥೆಗಳಿಗೆ ಸರ್ಕಾರ ಯಾವ ರೀತಿ ಪ್ರೋತ್ಸಾಹ ನೀಡುತ್ತದೆ? (ವಿವರ ನೀಡುವುದು) | ರಾಜ್ಯದಲ್ಲಿ ಕನ್ನಡ ಪರ ಸಂಘ ಸಂಸ್ಥೆಗಳು ಸಾಂಸ್ಕೃತಿಕ ಚಟುವಟಿಕೆಗಳನ್ನು ನಡೆಸಲು ಸರ್ಕಾರ ರೂಪಿಸಿರುವ ಮಾರ್ಗಸೂಚಿಯನುಸಾರ ಸಾಹಿತ್ಯಿಕ, ಸಾಂಸ್ಕೃತಿಕ, ಸಂಗೀತ, ನೃತ್ಯ, ಜಾನಪದ ಮುಂತಾದ ಕಲೆಗಳನ್ನು ಪ್ರೋತ್ಸಾಹಿಸಲು ಸಂಸ್ಥೆಗಳ ಕಾರ್ಯಚಟುವಟಿಕೆಗಳನ್ನು ಆಧರಿಸಿ ಧನಸಹಾಯ ನೀಡಲಾಗುತ್ತಿದೆ. |

ಸಂಖ್ಯೆ: ಕಸಂವಾ 49 ಕೆಓಎಲ್ 2018

ಡಾ. ಜಯಮಾಲ.
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಹಾಗೂ
ಹಿರಿಯನಾಗರಿಕರ ಸಬಲೀಕರಣ ಹಾಗೂ
ಕನ್ನಡ ಮತ್ತು ಸಂಸ್ಕೃತಿ ಸಚಿವರು